ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

KIADB/KSSIDC ವತಿಯಿಂದ ಹಿಂದುಳಿದ ವರ್ಗಗಳಿಗೆ ಫ್ಲಾಟ್‌ಗಳನ್ನು ಒದಗಿಸುವ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):-

213 (223) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳಿಗೆ ಕೆ.ಐ.ಎ.ಡಿ.ಬಿ. ಮತ್ತು ಕೆ.ಎಸ್.ಎಸ್.ಟಿ.ಡಿ.ಸಿ ಯಿಂದ ಹಂಚಿಕೆ ಮಾಡಲಾಗುವ ಫ್ಲಾಟ್‌ಗಳಿಗೆ ಸಬ್ಸಿಡಿ ನೀಡುವ ಕಾರ್ಯಕ್ರಮಕ್ಕೆ ಆದೇಶ ಹೊರಡಿಸಿರುವುದು ಯಾವಾಗ; (ಮಾಹಿತಿ ನೀಡುವುದು)

(ಆ) ಹಿಂದುಳಿದ ವರ್ಗಗಳಿಗೆ ಶೇಕಡ ಎಷ್ಟು ಸಬ್ಸಿಡಿಯನ್ನು ಈ ಫ್ಲಾಟ್‌ಗಳಿಗೆ ನೀಡುವ ಅವಕಾಶವನ್ನು ಕಲ್ಪಿಸಲಾಗಿದೆ;

(ಇ) ಸರ್ಕಾರ ಆದೇಶ ಹೊರಡಿಸಿದಾಗಿನಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಎಷ್ಟು ಹಿಂದುಳಿದ ವರ್ಗಗಳ ಫಲಾನುಭವಿಗಳು ಈ ಪ್ರಯೋಜನೆಯನ್ನು ಪಡೆದಿರುತ್ತಾರೆ; ಎಷ್ಟು ಸಬ್ಸಿಡಿಯನ್ನು ನೀಡಲಾಗಿದೆ ? (ವರ್ಗವಾರು, ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)